**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**29.09.2025 07.35 a.m.**
<><><><>

ಮುಖ್ಯಾಂಶಗಳು

1. ಮುಂದಿನ ವರ್ಷ ಮಾರ್ಚ್ ೩೧ರ ವೇಳೆಗೆ ದೇಶದಿಂದ ಎಡಪಂಥೀಯ ಉಗ್ರವಾದ ಸಂಪೂರ್ಣ ನಿರ್ಮೂಲನೆ - ಕೇಂದ್ರ ಗೃಹ ಸಚಿವ ಅಮಿತ್ ಶಾ
2. ಬಿಹಾರದಲ್ಲಿಂದು ಏಳು ರೈಲುಗಳಿಗೆ ಸಚಿವ ಅಶ್ವಿನಿ ವೈಷ್ಣವ್ ಚಾಲನೆ
3. ಮುಂಬರುವ ವಿವಿಧ ರಾಜ್ಯಗಳ ಚುನಾವಣೆಗಳಿಗಾಗಿ ಕೇಂದ್ರ ವೀಕ್ಷಕರನ್ನು ನಿಯೋಜಿಸಿದ ಚುನಾವಣಾ ಆಯೋಗ
4. ಟಿ-೨೦ ಕ್ರಿಕೆಟ್: ಪಾಕಿಸ್ತಾನ ವಿರುದ್ಧ ಗೆದ್ದ ಭಾರತ ತಂಡಕ್ಕೆ ಏಷ್ಯಾ ಕಪ್ ಕಿರೀಟ

<><><><>

ಮುಂದಿನ ವರ್ಷದ ಮಾರ್ಚ್ ೩೧ರ ವೇಳೆಗೆ ದೇಶದಿಂದ ಎಡಪಂಥೀಯ ಉಗ್ರವಾದವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ನಕ್ಸಲ್ ಮುಕ್ತ ಭಾರತ ಕಾರ್ಯಕ್ರಮದ ಸಮಾರೋಪ ಸಮಾವೇಶದಲ್ಲಿ ಮಾತನಾಡಿದ ಅವರು, ೨೦೧೪ ರಲ್ಲಿ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಅಧಿಕಾರಕ್ಕೆ ಬಂದಾಗ, ಭಾರತ, ಜಮ್ಮು-ಕಾಶ್ಮೀರ, ಈಶಾನ್ಯ ಪ್ರದೇಶ ಮತ್ತು ಹಿಂಸಾಚಾರ ಘಟನೆಗಳು ರಾಷ್ಟ್ರೀಯ ಭದ್ರತೆಯ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದ ಎಡಪಂಥೀಯ ಉಗ್ರವಾದ ಕಾರಿಡಾರ್ ಸೇರಿ ಒಟ್ಟು ಮೂರು ಪ್ರಮುಖ ಆಂತರಿಕ ಭದ್ರತಾ ತಾಣಗಳ ಸವಾಲನ್ನು ಎದುರಿಸಿತ್ತು. ಈ ಸವಾಲುಗಳನ್ನು ಎದುರಿಸಲು ಸರ್ಕಾರ ದೀರ್ಘಾವಧಿಯ ಕಾರ್ಯತಂತ್ರವನ್ನು ಅಳವಡಿಸಿಕೊಂಡಿದೆ ಎಂದರು.

ಧ್ವನಿ : ಅಮಿತ್ ಶಾ (೩೦ ಸೆಕೆಂಡ್‌ಗಳು)

ಈಶಾನ್ಯ ಪ್ರದೇಶದಲ್ಲಿ, ೨೦೦೪ ರಿಂದ ೨೦೧೪ ರವರೆಗಿನ ದಶಕಕ್ಕೆ ಹೋಲಿಸಿದರೆ ೨೦೧೪ ಮತ್ತು ೨೦೨೪ರ ನಡುವೆ ಹುತಾತ್ಮರಾದ ಭದ್ರತಾ ಸಿಬ್ಬಂದಿಗಳ ಸಂಖ್ಯೆ ಶೇಕಡಾ ೭೦ ರಷ್ಟು ಕಡಿಮೆಯಾಗಿದೆ ಎಂದು ಸಚಿವ ಅಮಿತ್ ಶಾ ಮಾಹಿತಿ ನೀಡಿದರು.

<><><>

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ಬಿಹಾರ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಇಂದು ಪಾಟ್ನಾ ಜಂಕ್ಷನ್‌ನಿಂದ ಬಿಹಾರಕ್ಕೆ ಏಳು ರೈಲುಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ. ಅವುಗಳಲ್ಲಿ ಮೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಮತ್ತು ನಾಲ್ಕು ಪ್ರಯಾಣಿಕ ರೈಲುಗಳು ಸೇರಿವೆ. ಸಚಿವ ಅಶ್ವಿನಿ ವೈಷ್ಣವ್ ವೀಡಿಯೊ ಕಾನ್ಫರೆನ್ಸಿಂಗ್ ಮೂಲಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಮೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಮುಜಫರ್ ಪುರವನ್ನು ಚರ್ಲಪಲ್ಲಿಗೆ, ದರ್ಭಂಗಾವನ್ನು ಮದರ್ ಜಂಕ್ಷನ್‌ಗೆ ಮತ್ತು ಛಪ್ರಾವನ್ನು ಆನಂದ್ ವಿಹಾರ್ ಟರ್ಮಿನಲ್‌ಗೆ ಸಂಪರ್ಕಿಸುತ್ತವೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.ಮಧ್ಯಮ ವರ್ಗ ಮತ್ತು ಸಾಮಾನ್ಯ ಜನರಲ್ಲಿ ಜನಪ್ರಿಯ ರೈಲು ಎಂದು ವಿಶಿಷ್ಟ ಗುರುತನ್ನು ಗಳಿಸಿರುವ ಅಮೃತ್ ಭಾರತ್ ಎಕ್ಸ್‌ಪ್ರೆಸ್, ಪ್ರಸ್ತುತ ದೇಶಾದ್ಯಂತ ೧೨ ಸೇವೆಗಳನ್ನು ನಿರ್ವಹಿಸುತ್ತಿದ್ದು, ಅವುಗಳಲ್ಲಿ ೧೦ ರೈಲುಗಳು ಬಿಹಾರದಿಂದ ಚಲಿಸುತ್ತವೆ. ಇನ್ನೂ ಮೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳನ್ನು ಪ್ರಾರಂಭಿಸುವುದರೊಂದಿಗೆ, ಅಮೃತ್ ಭಾರತ್ ರೈಲುಗಳ ಒಟ್ಟು ಸಂಖ್ಯೆ ೧೫ ಕ್ಕೆ ಏರಲಿದೆ. ಅಲ್ಲದೆ, ನಾಲ್ಕು ಹೊಸ ಪ್ರಯಾಣಿಕ ರೈಲುಗಳು ನವಾಡಾ, ಇಸ್ಲಾಂಪುರ, ಬಕ್ಸಾರ್ ಮತ್ತು ಝುಝಾ ಸೇರಿದಂತೆ ಪ್ರಮುಖ ಪಟ್ಟಣಗಳನ್ನು ಸಂಪರ್ಕಿಸುತ್ತವೆ.

<><><>

ಬಿಹಾರದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗಳು ಮತ್ತು ವಿವಿಧ ರಾಜ್ಯಗಳಾದ್ಯಂತ ಎಂಟು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗಳಿಗೆ ಕೇಂದ್ರ ವೀಕ್ಷಕರನ್ನು ನಿಯೋಜಿಸುವುದಾಗಿ ಭಾರತೀಯ ಚುನಾವಣಾ ಆಯೋಗ ಘೋಷಿಸಿದೆ. ಈ ವೀಕ್ಷಕರಲ್ಲಿ ಸಾಮಾನ್ಯ, ಪೊಲೀಸ್ ಮತ್ತು ವೆಚ್ಚ ವೀಕ್ಷಕರು ಸೇರಿರುತ್ತಾರೆ. ಮುಕ್ತ, ನ್ಯಾಯಯುತ ಮತ್ತು ಪಾರದರ್ಶಕ ಚುನಾವಣೆಗಳನ್ನು ಖಚಿತಪಡಿಸಿಕೊಳ್ಳಲು ೩೨೦ ಐಎಎಸ್ ಮತ್ತು ೬೦ ಐಪಿಎಸ್ ಅಧಿಕಾರಿಗಳು ಸೇರಿದಂತೆ ಒಟ್ಟು ೪೭೦ ಅಧಿಕಾರಿಗಳನ್ನು ಕೇಂದ್ರ ವೀಕ್ಷಕರಾಗಿ ನಿಯೋಜಿಸಲಾಗುವುದು. ಅವರು ಪ್ರತಿ ಕ್ಷೇತ್ರದಲ್ಲಿ ಚುನಾವಣಾ ಪ್ರಕ್ರಿಯೆಯನ್ನು ಮೇಲ್ವಿಚಾರಣೆ ಮಾಡುತ್ತಾರೆ, ಸುಧಾರಣೆಗಾಗಿ ಪ್ರದೇಶಗಳನ್ನು

ಗುರುತಿಸುತ್ತಾರೆ ಮತ್ತು ಕಾರ್ಯಸಾಧ್ಯ ಶಿಫಾರಸುಗಳನ್ನು ಮಾಡುತ್ತಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ವೀಕ್ಷಕರು ಮುಕ್ತ, ನ್ಯಾಯಯುತ, ಪಾರದರ್ಶಕ ಮತ್ತು ಎಲ್ಲರನ್ನೂ ಒಳಗೊಂಡ ಚುನಾವಣೆಗಳನ್ನು ನಡೆಸುವ ಸಾಂವಿಧಾನಿಕ ಆದೇಶವನ್ನು ಪೂರೈಸುವಲ್ಲಿ ಚುನಾವಣಾ ಸಮಿತಿಗೆ ಸಹಾಯ ಮಾಡುವುದಲ್ಲದೆ, ಮತದಾರರ ಜಾಗೃತಿ ಮತ್ತು ಚುನಾವಣೆಯಲ್ಲಿ ಭಾಗವಹಿಸುವಿಕೆಯನ್ನು ಹೆಚ್ಚಿಸಲು ಕೊಡುಗೆ ನೀಡುತ್ತಾರೆ ಎಂದು ಆಯೋಗ ಹೇಳಿದೆ.

<><><><>

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು, ಈ ವಿಶೇಷ ಸರಣಿ - 'ಸೇವಾ ಪರ್ವ'ದಲ್ಲಿ ಕೇಂದ್ರ ಸರ್ಕಾರದ ರೈಲ್ವೆ ಸುಧಾರಣೆಗಳು ಭಾರತದ ಜೀವನಾಡಿಯನ್ನು ಹೇಗೆ ಆಧುನೀಕರಿಸುತ್ತಿವೆ, ವಿಶ್ವ ದರ್ಜೆಯ ಪ್ರಯಾಣ, ವರ್ಧಿತ ಸುರಕ್ಷತೆ ಮತ್ತು ಪ್ರತಿಯೊಬ್ಬ ನಾಗರಿಕರಿಗೂ ತಡೆರಹಿತ ಸಂಪರ್ಕವನ್ನು ನೀಡುತ್ತಿವೆ ಎಂಬುದರ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

ಧ್ವನಿ: ವಿಶೇಷ ವರದಿ

ಭಾರತೀಯ ರೈಲ್ವೆಯು ರೈಲು ಕಾರ್ಯಾಚರಣೆಗಳಿಗೆ ಅತ್ಯುನ್ನತ ಸುರಕ್ಷತಾ ಮಾನದಂಡಗಳನ್ನು ಖಾತ್ರಿಪಡಿಸಲು, ಅತ್ಯಾಧುನಿಕ ಸ್ವಯಂಚಾಲಿತ ರೈಲು ರಕ್ಷಣಾ ವ್ಯವಸ್ಥೆಯಾದ ಕವಾಚ್ ಅನ್ನು ಸಹ ಪರಿಚಯಿಸಿದೆ. ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು, ೨೦೩೦ ರ ವೇಳೆಗೆ 'ಭವಿಷ್ಯಕ್ಕೆ ಸಿದ್ಧ' ರೈಲ್ವೆ ವ್ಯವಸ್ಥೆಯನ್ನು ರಚಿಸಲು ರಾಷ್ಟ್ರೀಯ ರೈಲು ಯೋಜನೆಯನ್ನು ಸಿದ್ಧಪಡಿಸಲಾಗಿದೆ. ಸಾಮಾನ್ಯ ಜನರಿಗೆ ಅಗ್ಗದ, ಸುರಕ್ಷಿತ ಮತ್ತು ವಿಶ್ವಾಸಾರ್ಹ ಸಾರಿಗೆ ವಿಧಾನವನ್ನು ತಲುಪಿಸುವತ್ತ ಗಮನಹರಿಸಲಾಗಿದೆ.

<><><><>

ಕಳೆದ ದಶಕದಲ್ಲಿ ಭಾರತದ ರೈಲ್ವೆ ಸುಧಾರಣೆಗಳು ಹಳಿಗಳ ಮೇಲೆ ಕ್ರಾಂತಿಯನ್ನು ಹುಟ್ಟುಹಾಕಿವೆ. ರಾಷ್ಟ್ರದ ಜೀವನಾಡಿಯನ್ನು ಪ್ರಗತಿಯ ಶಕ್ತಿಕೇಂದ್ರವನ್ನಾಗಿ ಪರಿವರ್ತಿಸಿವೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅಡಿಯಲ್ಲಿ, ಪ್ರಯಾಣಿಕರಿಗೆ ಹೆಚ್ಚು ಆರಾಮದಾಯಕ, ಸುರಕ್ಷಿತ

ಮತ್ತು ವಿಶ್ವ ದರ್ಜೆಯ ಪ್ರಯಾಣದ ಅನುಭವವನ್ನು ಒದಗಿಸಲು ಭಾರತೀಯ ರೈಲ್ವೆಯನ್ನು ಪರಿವರ್ತಿಸಲಾಗಿದೆ. ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ, ಭಾರತೀಯ ರೈಲ್ವೆ ತಡೆರಹಿತ ಸಂಪರ್ಕವನ್ನು ಕಲ್ಪಿಸುತ್ತಿದೆ. ಇತ್ತೀಚೆಗೆ ಕಾಶ್ಮೀರ ಕಣಿವೆಯಲ್ಲಿ ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಮಾರ್ಗವನ್ನು ಪ್ರಾರಂಭಿಸಲಾಯಿತು. ಪ್ರಯಾಣವನ್ನು ಸುರಕ್ಷಿತ ಮತ್ತು ಆರಾಮದಾಯಕವಾಗಿಸಲು ಸರ್ಕಾರ ಅಮೃತ್ ಭಾರತ್ ರೈಲು ಮತ್ತು ನಮೋ ಭಾರತ್ ರ‍್ಯಾಪಿಡ್ ರೈಲನ್ನು ಸಹ ಪರಿಚಯಿಸಿತು. ಮುಂದಿನ ಮೂರು ವರ್ಷಗಳಲ್ಲಿ, ೨೦೦ ಹೊಸ ವಂದೇ ಭಾರತ್ ರೈಲುಗಳು, ೧೦೦ ಅಮೃತ್ ಭಾರತ್ ರೈಲುಗಳು, ೫೦ ನಮೋ ಭಾರತ್ ಕ್ಷಿಪ್ರ ರೈಲು ಮತ್ತು ೧೭ ಸಾವಿರದ ೫೦೦ ಸಾಮಾನ್ಯ ಹವಾನಿಯಂತ್ರಿತವಲ್ಲದ ಬೋಗಿಗಳು ಜನಸಾಮಾನ್ಯರಿಗೆ ಪ್ರಯಾಣದ ಅನುಭವದಲ್ಲಿ ಕ್ರಾಂತಿಯನ್ನುಂಟು ಮಾಡಲು ಯೋಜಿಸಲಾಗಿದೆ. ವಿಶ್ವ ದರ್ಜೆಯ ಸೌಲಭ್ಯಗಳನ್ನು ಖಚಿತಪಡಿಸಿಕೊಳ್ಳುವ ಅಮೃತ್ ಭಾರತ್ ನಿಲ್ದಾಣ ಯೋಜನೆಯಡಿಯಲ್ಲಿ ೧ ಸಾವಿರದ ೩೦೦ ಕ್ಕೂ ಹೆಚ್ಚು ನಿಲ್ದಾಣಗಳನ್ನು ಪುನರಾಭಿವೃದ್ಧಿ ಮಾಡಲಾಗುತ್ತಿದೆ.

<><><>

ರಾಷ್ಟ್ರೀಯ ಸ್ವಯಂಸೇವಕ ಸಂಘ ಸರಸಂಘಚಾಲಕರಾದ ಡಾ. ಮೋಹನ್ ಭಾಗವತ್ ಸಂಘವು ದೇಶದ "ಸರ್ಗಂ" ಎಂದು ಹೇಳಿದ್ದಾರೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ ಶತಮಾನೋತ್ಸವ ಆಚರಣೆಯ ಅಂಗವಾಗಿ ನಾಗ್ಪುರದ ಕವಿವರ್ಯ ಸುರೇಶ್ ಭಟ್ ಸಭಾಂಗಣದಲ್ಲಿ ನಿನ್ನೆ ನಡೆದ ಆರ್‌ಎಸ್‌ಎಸ್ ಹಾಡುಗಳ ವಿಶೇಷ ಸಂಗ್ರಹದ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

<><><>

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಫೈನಲ್ ಪಂದ್ಯದಲ್ಲಿ ಪಾಕಿಸ್ತಾನವನ್ನು ಐದು ವಿಕೆಟ್‌ಗಳಿಂದ ಸೋಲಿಸಿ ಒಂಬತ್ತನೇ ಬಾರಿಗೆ ಭಾರತ ಏಷ್ಯಾ ಕಪ್ ಮುಡಿಗೇರಿಸಿಕೊಂಡಿತು. ಮೊದಲು ಬ್ಯಾಟಿಂಗ್ ಮಾಡಿದ ಪಾಕಿಸ್ತಾನ ೧೯.೧ ಓವರ್‌ಗಳಿಗೆ ೧೪೬ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತದ ಪರ ಕುಲದೀಪ್ ಯಾದವ್ ೪ ವಿಕೆಟ್‌ಗಳನ್ನು ಕಬಳಿಸಿದರೆ, ಜಸ್ಪ್ರೀತ್ ಬೂಮ್ರಾ, ವರುಣ್ ಚಕ್ರವರ್ತಿ ಮತ್ತು ಅಕ್ಸರ್ ತಲಾ ಎರಡು ವಿಕೆಟ್‌ಗಳನ್ನು ಪಡೆದರು. ಈ ಗುರಿಯನ್ನು ಬೆನ್ನತ್ತಿದ ಭಾರತ, ೧೯.೪ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೫೦ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ತಿಲಕ್ ವರ್ಮಾ ಅಜೇಯ ೬೯

ರನ್ ಗಳಿಸುವ ಮೂಲಕ ಪಂದ್ಯದ ಗೆಲುವಿಗೆ ನಿರ್ಣಾಯಕರಾದರು. ಇದೇ ವೇಳೆ ತಿಲಕ್ ವರ್ಮಾ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರೆ, ಅಭಿಷೇಕ್ ಶರ್ಮಾ ಸರಣಿ ಶ್ರೇಷ್ಠ ಪ್ರಶಸ್ತಿಗೆ ಪಾತ್ರರಾದರು. ಏಷ್ಯಾ ಕಪ್ ಗೆಲುವಿಗಾಗಿ ಭಾರತ ತಂಡವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಶುಭಾಶಯ ಕೋರಿದ್ದಾರೆ.

<><><><>

ದೆಹಲಿಯ ಡಾ. ಕರ್ಣಿ ಸಿಂಗ್ ರೇಂಜ್‌ನಲ್ಲಿ ನಡೆದ ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವಕಪ್‌ನ ಮಹಿಳೆಯರ ೫೦ ಮೀಟರ್ ರೈಫಲ್ ೩-ಪೊಸಿಷನ್ಸ್ ಶೂಟಿಂಗ್ ಸ್ಪರ್ಧೆಯಲ್ಲಿ ಭಾರತದ ಅನುಷ್ಕಾ ಥೋಕೂರ್ ಚಿನ್ನದ ಪದಕ ಗೆದ್ದಿದ್ದಾರೆ. ೫೦ ಮೀಟರ್ ರೈಫಲ್ ಪ್ರೋನ್ ಸ್ಪರ್ಧೆಯಲ್ಲಿ ಗೆದ್ದ ನಂತರ, ಸ್ಪರ್ಧೆಯಲ್ಲಿ ಇದು ಥೋಕೂರ್ ಅವರ ಎರಡನೇ ಚಿನ್ನದ ಪದಕವಾಗಿದೆ. ಜೂನಿಯರ್ ಪುರುಷರ ೫೦ ಮೀಟರ್ ಸ್ಪರ್ಧೆಯಲ್ಲಿ ೩-ಪೊಸಿಷನ್ಸ್‌ನಲ್ಲಿ, ಆಡ್ರಿಯನ್ ಕರ್ಮಾಕರ್ ಬೆಳ್ಳಿ ಪದಕವನ್ನು ಪಡೆದುಕೊಂಡರು. ಭಾರತ ಪ್ರಸ್ತುತ ನಾಲ್ಕು ಚಿನ್ನ, ಆರು ಬೆಳ್ಳಿ ಮತ್ತು ಮೂರು ಕಂಚಿನ ಪದಕಗಳೊಂದಿಗೆ ಪದಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>